<u>ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳವರ ನ್ಯಾಯಾಲಯ..... ಚಿತ್ತಾಪೂರ</u>

C.C No. 511/2015
CW- 2 PW- 3

ಹೆಸರು : ಶಂಕರ್

ತಂದೆಯ ಹೆಸರು: ಸಿದ್ದಪ್ಪ ಕೇತಪ್ಪಗೋಳ್

ವಯಸ್ಸು : 50 ವರ್ಷ

ಉದ್ಯೋಗ : ಕೂಲಿ

ವಾಸ ಸ್ಥಳ : ಬೆಳಗುಂಪಾ

---

<u>ಪ್ರಮಾಣವಚನ ಭೋಧಿಸಲಾಯಿತು. ದಿಃ 09-12-2025</u>

<u>ಮುಖ್ಯ ವಿಚಾರಣೆಃ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರಿಂದ</u>

ನನಗೆ ಚಾಸಾ-3ರವರ ಪರಿಚಯ ಇದೆ. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಸುಮಾರು 8-9 ವರ್ಷಗಳ ಹಿಂದೆ ಪೋಲೀಸರು ನನ್ನ ಸಹಿಗಳನ್ನು 2 ದಾಖಲೆಗಳ ಮೇಲೆ ಪಡೆದಿರುತ್ತಾರೆ. ಸಾಕ್ಷಿ ಈಗ ನಿಪಿ-2 ಮತ್ತು 3ರಲ್ಲಿರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ- 2(ಬಿ) ಮತ್ತು 3(ಸಿ ಮತ್ತು ಡಿ) ಎಂದು ಗುರುತಿಸಲಾಯಿತು. ನಿಪಿ- 2 ಮತ್ತು 3ರಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಮಾಹಿತಿ ಇಲ್ಲ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಗಳನ್ನು ಮಾಡಿ ಯಾವುದೇ ವಾಹನವನ್ನು ಅಮಾನತುಪಡಿಸಿಕೊಂಡಿಲ್ಲ.

(ಮಾನ್ಯ ಸ ಸ ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿದ್ದು ದಾಖಲೆಗಳನ್ನು ಪರಿಶೀಲಿಸಿ ಸದರಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ನೀಡಲಾಯಿತು.)

<u>ಪಾಟೀ ಸವಾಲುಃ ಸ.ಸ.ಅಭಿಯೋಜಕರವರಿಂದ</u>

ದಿಃ 23.09.2015ರಂದು ರಾತ್ರಿ 08.30 ರಿಂದ 09.00 ಗಂಟೆ ಸಮಯದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-2ರಂತೆ ಘಟನಾ ಸ್ಥಳದ ಪಂಚನಾಮೆಯನ್ನು ಜರಗಿಸಿರುತ್ತಾರೆ ಎಂದರೆ ಸರಿಯಲ್ಲ. ಅದೇ ದಿನ ಪೋಲೀಸರು ಸಂಜೆ 06.30 ಗಂಟೆಯಿಂದ 07.00 ಗಂಟೆ ಸಮಯದಲ್ಲಿ ನಿಪಿ-3ರಂತೆ ಪಂಚನಾಮೆಯನ್ನು ಜರಗಿಸಿ ಒಂದು ಟ್ರ್ಯಾಕ್ಟರ್ ಮತ್ತು ಟ್ರಾಲಿಯನ್ನು ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಅದೇ ರೀತಿ ಪೋಲೀಸರು ಟ್ರಾಲಿಯಲ್ಲಿದ್ದ ಮರಳನ್ನು ಸಹ ಜಪ್ತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ- 2 ಮತ್ತು 3ನ್ನು ನಿಮ್ಮ ಸಮಕ್ಷಮ ಜರಗಿಸಿದರೂ ಸಹ ಈಗ ಆರೋಪಿತರೊಂದಿಗೆ ಶಾಮೀಲಾಗಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೀರಿ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ.ಎಸ್.ಬಿ.ಕೆ. ವಕೀಲರಿಂದ - ಏನು ಇಲ್ಲ</u>

**ಮರು ವಿಚಾರಣೆಃ** ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು )

ಓ. ಹೇ ಕೇ.ಸರಿ ಇದೆ.

ಸಿವಿಲ್ & J.M.F.C ನ್ಯಾಯಾಧೀಶರು,

ಚಿತ್ತಾಪೂರ.